## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1053 |
| ಮಾನ್ಯ ಸದಸ್ಯರ ಹೆಸರು | ಶ್ರೀ ಶಾಂತರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 23.02.2024 |
| ಉತ್ತರಿಸುವ ಸಚಿವರು | ಮಾನ್ಯ ಪರಿಶಿಷ್ಟ ಪಂಗಡಗಳ ಕಲ್ಯಾಣ, ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯ ಬುಡಕಟ್ಟು ಸಿದ್ದಿ ಜನಾಂಗದವರಿಗೆ ನೀಡುತ್ತಿರುವ ಪೌಷ್ಠಿಕ ಆಹಾರ ವಿತರಣೆಯು 6 ತಿಂಗಳು ತಡವಾಗಿ ನೀಡಿರುವುದು ನಿಜವೇ: | ಉತ್ತರ ಕನ್ನಡ ಜಿಲ್ಲೆಯ ಬುಡಕಟ್ಟು ಸಿದ್ದಿ ಜನಾಂಗದವರಿಗೆ ನೀಡುತ್ತಿರುವ ಪೌಷ್ಠಿಕ ಆಹಾರ ವಿತರಣೆಯ ಪ್ರಕ್ರಿಯೆಯು ನಿರಂತರವಾಗಿ ಹಾಗೂ ನಿಯಮಿತವಾಗಿ ನಡೆಯುತ್ತಿದೆ. |
| ಆ) | ಹಾಗಿದ್ದಲ್ಲಿ, ಕಳೆದ 6 ತಿಂಗಳ ಪೌಷ್ಠಿಕ ಆಹಾರವನ್ನು ಮುಂದಿನ ದಿನಗಳಲ್ಲಿ ಹೆಚ್ಚುವರಿಯಾಗಿ ನೀಡಲಾಗುತ್ತದೆಯೇ: ಇಲ್ಲವಾದಲ್ಲಿ ಕಾರಣವೇನು) | ರಾಜ್ಯದ 08 ಜಿಲ್ಲೆಗಳಾದ ಮೈಸೂರು, ಚಾಮರಾಜನಗರ, ಕೊಡಗು, ದಕ್ಷಿಣಕನ್ನಡ, ಉಡುಪಿ, ಉತ್ತರಕನ್ನಡ, ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಅರಣ್ಯ ಹಾಗೂ ಅರಣ್ಯದಂಚಿನಲ್ಲಿ ವಾಸಿಸುವ ಮೂಲನಿವಾಸಿ ಪಂಗಡಗಳಾದ ಕೊರಗ ಮತ್ತು ಜೇನುಕುರುಬ ಹಾಗೂ ಇತರೆ ಪರಿಶಿಷ್ಟ ಪಂಗಡದವರಾದ ಕಾಡುಕುರುಬ, ಸೋಲಿಗ, ಯರವ, ಮಲೆಕುಡಿಯ, ಸಿದ್ದಿ, ಹಸಲರು, ಗೌಡಲು, ಗೊಂಡ ಮತ್ತು ಬೆಟ್ಟಕುರುಬ ಜನಾಂಗದ ಒಟ್ಟಾರೆ 47859 ಕುಟುಂಬಗಳು ಅರಣ್ಯ ಮತ್ತು ಅರಣ್ಯದಂಚಿನಲ್ಲಿ ವಾಸಿಸುತ್ತಿದ್ದು, ಅವರಿಗೆ ಮಳೆಗಾಲದಲ್ಲಿ ಜೀವನ ನಿರ್ವಹಣೆಗೆ ತೊಂದರೆಯಾಗುವುದನ್ನು ನಿವಾರಿಸಲು ಹಾಗೂ ಸಮುದಾಯದವರಿಗೆ ಪೌಷ್ಠಿಕ ಆಹಾರ ಪದಾರ್ಥಗಳನ್ನು ವಿತರಿಸುವ ಯೋಜನೆಯನ್ನು ವಾರ್ಷಿಕ 6 ತಿಂಗಳಿಗೆ ನೀಡಲಾಗುತ್ತಿದ್ದು, ಇದನ್ನು 2023-24ನೇ ಸಾಲಿನ ಆಯವ್ಯಯ ಘೋಷಣೆ ದಿನಾಂಕ:07.07.2023 ರಲ್ಲಿ 12 ತಿಂಗಳಿಗೆ ವಿಸ್ತರಿಸಲು ಘೋಷಿಸಲಾಗಿರುತ್ತದೆ. ಸರ್ಕಾರದ ಆದೇಶ ಸಂಖ್ಯೆ:ಸಕಇ 121 ಎಸ್‌ಟಿಪಿ 2023 ದಿನಾಂಕ:11.08.2023ರಂತೆ ವರ್ಷದ 12 ತಿಂಗಳು ಪೌಷ್ಠಿಕ ಆಹಾರ ಪದಾರ್ಥಗಳನ್ನು ನೀಡಲಾಗುತ್ತಿದೆ. |

STW/STP/102/2024

(ಬಿ.ನಾಗೇಂದ್ರ)

ಪರಿಶಿಷ್ಟ ಪಂಗಡಗಳ ಕಲ್ಯಾಣ,
ಯುವ ಸಬಲೀಕರಣ ಹಾಗೂ ಕ್ರೀಡಾ ಸಚಿವರು